ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2270

ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 26-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ರಾಜ್ಯದ ರೈತರ ಸಂಪೂರ್ಣ ಮಾಹಿತಿಗಳನ್ನೊಳಗೊಂಡ "ಸ್ವಾಭಿಮಾನಿ ರೈತ" ಗುರುತಿನ ಚೀಟಿ ವಿತರಣೆಯಲ್ಲಿನ ವ್ಯತ್ಯಯದ ವರದಿಯನ್ನು ಸರ್ಕಾರ ಗಮನಿಸಿದೆಯೇ;	ಯಾವುದೇ ವ್ಯತ್ಯಯ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. "ಸ್ವಾಭಿಮಾನಿ ರೈತ" ಗುರುತಿನ ಚೀಟಿಯನ್ನು ಕೊಪ್ಪಳ ಜಿಲ್ಲೆಯಲ್ಲಿ ಮಾತ್ರ ವಿತರಿಸಲಾಗಿದೆ.
ಆ.	ಸ್ವಾಭಿಮಾನಿ ರೈತ ಗುರುತಿನ ಚೀಟಿ ಪಡೆಯಲು ಇರುವ ಮಾನದಂಡಗಳಾವುವು; (ಮಾಹಿತಿ ನೀಡುವುದು)	• FRUITS (Farmer Registration and Unified beneficiary InformaTion System) ತಂತ್ರಾಂಶದಲ್ಲಿ ನೋಂದಣಿಯಾಗಿರಬೇಕು. • ನೋಂದಣಿ ಮಾಡಲು ರೈತರು ಪಹಣಿ, ಆಧಾರ್, ಬ್ಯಾಂಕ್ ಖಾತೆ ವಿವರ ಹೊಂದಿರಬೇಕು. • ರೈತರು ನೋಂದಣಿಯನ್ನು ಕೃಷಿ/ತೋಟಗಾರಿಕೆ/ರೇಷ್ಮೆ/ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆಗಳಲ್ಲಿ ಮಾಡಿಸಬಹುದು.
ಇ.	ಈವರೆಗೆ ರಾಜ್ಯದಲ್ಲಿ ಎಷ್ಟು ರೈತರಿಗೆ "ಸ್ವಾಭಿಮಾನಿ ರೈತ" ಗುರುತಿನ ಚೀಟಿ ವಿತರಿಸಲಾಗಿದೆ;	"ಸ್ವಾಭಿಮಾನಿ ರೈತ' ಗುರುತಿನ ಚೀಟಿಯನ್ನು ಕೊಪ್ಪಳ ಜಿಲ್ಲೆಯಲ್ಲಿ ಮಾತ್ರ ಒಟ್ಟು 18903 ರೈತರಿಗೆ ವಿತರಿಸಲಾಗಿದೆ.
ಈ.	ಸದರಿ ಯೋಜನೆಗೆ ನಿಗದಿಪಡಿಸಿರುವ ಅನುದಾನದ ಮಾಹಿತಿ ನೀಡುವುದು;	ಕೊಪ್ಪಳ ಜಿಲ್ಲಾಡಳಿತದಿಂದ ಜಿಲ್ಲಾ ಖನಿಜ ಪ್ರತಿಷ್ಠಾನದಿಂದ ರೂ.72.00 ಲಕ್ಷಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದೆ.
ಉ)	ಬೆಳಗಾವಿ ಜಿಲ್ಲೆಯಲ್ಲಿ ಈವರೆಗೆ ಎಷ್ಟು ರೈತರಿಗೆ ಸ್ವಾಭಿಮಾನಿ ರೈತರ ಗುರುತಿನ ಚೀಟಿ ನೀಡಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)	ಬೆಳಗಾವಿ ಜಿಲ್ಲೆಯಲ್ಲಿ ಈವರೆಗೆ ಯಾವುದೇ ಸ್ವಾಭಿಮಾನಿ ರೈತರ ಗುರುತಿನ ಚೀಟಿ ನೀಡಿರುವುದಿಲ್ಲ.

ಸಂಖ್ಯೆ: AGRI-AML/103/2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು